ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಸಬ್‌ರಿಜಿಸ್ಟರ್ ಕಛೇರಿಗಳಲ್ಲಿ ಖಾಸಗಿ ದಲ್ಲಾಳಿಗಳ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-

206 (298) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ಸಂಖ್ಯೆ ಎಷ್ಟು;

(ಆ) ಈ ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ಕಛೇರಿಗಳಲ್ಲಿ ಖಾಸಗಿ ದಲ್ಲಾಳಿಗಳೊಂದಿಗೆ ಶಾಮೀಲಾಗಿ ನೋಂದಣಾಧಿಕಾರಿ (ಸಬ್‌ರಿಜಿಷ್ಟರ್) ಗಳು ನಿಯಮಗಳನ್ನು ಪಾಲಿಸದೆ ವ್ಯಾಪಕ ಭೃಷ್ಟಾಚಾರದಲ್ಲಿ ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಕಳೆದ 5 ವರ್ಷಗಳಿಂದ ಎಷ್ಟು ಜನ ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆ;

(ಈ) ಉಪ ನೋಂದಣಾಧಿಕಾರಿ (ಸಬ್‌ರಿಜಿಸ್ಟರ್) ಗಳ ವರ್ಗಾವಣೆಗೆ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ?